**ಕರ್ನಾಟಕ ಸರ್ಕಾರ**

**ಸಂ:**ಗ್ರಾಅಪ/21/ಗ.ಕೋಶ/2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು,ದಿನಾಂಕ:06.09.2018

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬಹುಮಹಡಿಗಳ ಕಟ್ಟಡ
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ಮಾನ್ಯರೇ,**

**ವಿಷಯ:** ಜಿಲ್ಲಾ ಪಂಚಾಯತಿಗಳಲ್ಲಿ ಇ-ಹಾಜರಾತಿಯ ಬಳಕೆಯನ್ನು ಕಡ್ಡಾಯಗೊಳಿಸುವ ಬಗ್ಗೆ.

**ಉಲ್ಲೇಖ:** ದಿನಾಂಕ: 27.08.2018 ರಂದು ಜರುಗಿದ ಸಭೆಯ ನಡವಳಿಗಳು.

******

ಜಿಲ್ಲಾ ಪಂಚಾಯತಿಗಳ ಎಲ್ಲಾ ಸಿಬ್ಬಂದಿಗಳಿಗೆ ಪಂಚತಂತ್ರ ತಂತ್ರಾಂಶದ ಮುಖಾಂತರ ಇ-ಹಾಜರಾತಿಯನ್ನು ನೀಡಲು ಸರ್ಕಾರವು ಆದೇಶ ಹೊರಡಿಸಿದ್ದರೂ, ಬಹಳಷ್ಟು ಸಿಬ್ಬಂದಿಗಳು ಇ-ಹಾಜರಾತಿಯನ್ನು ಬಳಸದೇ ಇರುವುದು ಕಂಡುಬಂದಿದೆ.

ಜಿಲ್ಲಾ ಪಂಚಾಯತಿಗಳ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಇ-ಹಾಜರಾತಿ ಬಳಸುವಂತೆ ಮೇಲ್ವಿಚಾರಣೆ ಮಾಡಬೇಕಾಗಿರುತ್ತದೆ. ಜಿಲ್ಲಾ ಪಂಚಾಯತಿಗಳಲ್ಲಿ ಇ-ಹಾಜರಾತಿ ಕಡ್ಡಾಯಗೊಳಿಸುವ ಸಲುವಾಗಿ ಜಿಲ್ಲಾ ಪಂಚಾಯತಿ ಸಿಬ್ಬಂದಿಗಳ ವೇತನವನ್ನು ಇ-ಹಾಜರಾತಿಯ ವರದಿಯ ಆಧಾರದ ಮೇಲೆ ಪಾವತಿಸುವಂತೆ ಕ್ರಮ ವಹಿಸಲು ಸಂಬಂಧಪಟ್ಟ ಎಲ್ಲಾ DDO ಗಳಿಗೆ ನಿರ್ದೇಶಿಸಲು ಈ ಮೂಲಕ ಸೂಚಿಸಿದೆ.

ಸಂಬಂಧಪಟ್ಟ ಅಧಿಕಾರಿಗಳು ಮೇಲ್ಕಂಡಂತೆ ಕ್ರಮವಹಿಸಿ ಎಲ್ಲಾ ಜಿಲ್ಲಾ ಪಂಚಾಯತಿಗಳಲ್ಲಿ ಶೇಕಡ 100 ರಷ್ಟು ಹಾಜರಾತಿಯನ್ನು ಬಳಸುವಂತೆ ಈ ಮೂಲಕ ಸೂಚಿಸಿದೆ ಹಾಗೂ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸದರಿ ಪ್ರಕ್ರಿಯೆಯ ಮೇಲ್ವಿಚಾರಣೆ ಮಾಡಲು ಈ ಮೂಲಕ ತಿಳಿಸಿದೆ.

ಜಿಲ್ಲಾ ಪಂಚಾಯತಿಗಳಲ್ಲಿ ಇ-ಹಾಜರಾತಿಯನ್ನು ಮೇಲ್ವಿಚಾರಣೆ ಮಾಡಲು ಸಹಾಯಕ ಕಾರ್ಯದರ್ಶಿರವರನ್ನು ನೋಡಲ್ ಅಧಿಕಾರಿಗಳನ್ನಾಗಿ ಈ ಮೂಲಕ ನೇಮಿಸಿದೆ.

(ಎಸ್.ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು(ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

d:\d.k.-2018\spm letter\e-attendance.docx

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ, ಬೆಂಗಳೂರು.

**ಪ್ರತಿ ಕ್ರಮಕ್ಕಾಗಿ:**

1. ಉಪಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2. ಮುಖ್ಯ ಲೆಕ್ಕಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
3. ಮುಖ್ಯ ಯೋಜನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
4. ಸಹಾಯಕ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
5. ಜಿಲ್ಲಾ ಯೋಜನಾ ವ್ಯವಸ್ಥಾಪಕರು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.